Akashvani : Bangalore
Regional Bulletin In Kannada
16.08.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- **ರಾಜ್ಯದಲ್ಲಿ ೭೦ ಲಕ್ಷ ಹೆಕ್ಟೆರ್ ಬಿತ್ತನೆಯಾಗಿದ್ದು, ಈ ಬಾರಿ ಗುರಿ ಮೀರಿ ಸಾಧನೆಯ ನಿರೀಕ್ಷೆ- ಮುಖ್ಯಮಂತ್ರಿ**
- **ಆಪಲ್ ಸಂಸ್ಥೆಯ ಫಾಕ್ಸ್ ಕಾನ್ ಮುಖ್ಯಸ್ಥ ಯಂಗ್ ಲಿಯು ಬೆಂಗಳೂರಿಗೆ ಆಗಮನ; ಹೂಡಿಕೆ ಕುರಿತು ಸರ್ಕಾರದೊಂದಿಗೆ ಮಾತುಕತೆ**
- **ವೈಭವದಿಂದ ಮೈಸೂರು ದಸರಾ ಆಚರಣೆ; ಝುಗಮಗಿಸುವ ದೀಪಾಲಂಕಾರಕ್ಕೆ ವ್ಯವಸ್ಥೆ**
- **ಕಾಂತಾರ ಚಿತ್ರದ ನಟನೆಗೆ ರಿಷಬ್ ಶೆಟ್ಟಿಗೆ ರಾಷ್ಟ್ರಪ್ರಶಸ್ತಿ; ಎರಡು ಪುರಸ್ಕಾರಗಳಿಗೆ ಭಾಜನವಾದ ಕೆಜಿಎಫ್-೨**

**<><*<><>*><>**

ಮುಂದಿನ ನಾಲ್ಕು ವಾರಗಳಲ್ಲಿ ದಕ್ಷಿಣ ಒಳನಾಡು, ಉತ್ತರ ಒಳನಾಡು, ಕರಾವಳಿ, ಮಲೆನಾಡಿನಲ್ಲಿ ವಾಡಿಕೆಗಿಂತ ಅಧಿಕ ಮಳೆಯಾಗಲಿರುವ ಹಿನ್ನೆಲೆಯಲ್ಲಿ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿಂದು ಅತಿವೃಷ್ಟಿ ಮತ್ತು ಪ್ರವಾಹ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದ ಅವರು, ಜೂನ್ ೧ ರಿಂದ ಆಗಸ್ಟ್ ೧೫ರವರೆಗೆ ರಾಜ್ಯದಲ್ಲಿ ವಾಡಿಕೆಗಿಂತ ಶೇಕಡ ೨೨ ರಷ್ಟು ಹೆಚ್ಚು ಮಳೆಯಾಗಿದೆ. ತುಮಕೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಅತ್ಯಧಿಕ ಮಳೆಯಾಗಿದೆ. ಆದರೆ ೧೩ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ಸುರಿದಿರುವ ಬಗ್ಗೆ ವರದಿಗಳು ತಿಳಿಸಿವೆ ಎಂದರು. ಆದರೆ ೯ ತಾಲೂಕುಗಳಲ್ಲಿ ಕಡಿಮೆ ಮಳೆಯಾಗಿದೆ. ರಾಜ್ಯದಲ್ಲಿ ೮೨ ಲಕ್ಷ ಹೆಕ್ಟೇರ್ ಬಿತ್ತನೆಯ ಗುರಿಯಿದ್ದು, ಈಗಾಗಲೇ ೭೦ ಲಕ್ಷ ಹೆಕ್ಟೆರ್ ಬಿತ್ತನೆಯಾಗಿದೆ. ಗುರಿ ಮೀರಿ ಸಾಧನೆಯ ನಿರೀಕ್ಷೆಯಿದೆ. ಪೂರ್ವ ಮುಂಗಾರಿನಲ್ಲಿ ಬಿತ್ತನೆಯಾದ ಉದ್ದು ಮತ್ತು ಹೆಸರು ಕಟಾವಿಗೆ ಬಂದಿದೆ. ಹೆಚ್ಚು ಮಳೆಯಾಗಿರುವ ಪ್ರದೇಶಗಳಲ್ಲಿ ವಿವಿಧ ಏತ ನೀರಾವರಿ ಯೋಜನೆಗಳ ಮೂಲಕ ಕೆರೆಗಳನ್ನು ತುಂಬಿಸಬೇಕು. ಅಂತರ್ಜಲ ವೃದ್ಧಿಗೆ ಒತ್ತು ನೀಡಬೇಕು. ಒಟ್ಟಾರೆ ಜಲಾಶಯಗಳು

ಶೇಕಡ ೮೯ ರಷ್ಟು ಭರ್ತಿಯಾಗಿವೆ ಎಂದರು. ಮಳೆ ಅನಾಹುತಗಳನ್ನು ತಡೆಗಟ್ಟಲು ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಅತಿವೃಷ್ಟಿಯಿಂದ ೬೭ ಮಂದಿ ಮೃತಪಟ್ಟಿದ್ದು, ೬೬ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದೆ. ಪ್ರವಾಹ ನಿಯಂತ್ರಣಕ್ಕೆ ಪಂಚಾಯತ್ ಮಟ್ಟದ ಕಾರ್ಯಪಡೆಗಳಿಗೆ ತಲಾ ೨೦ ಲಕ್ಷ ಅನುದಾನ ಒದಗಿಸಲಾಗಿದೆ. ಮನೆ ಹಾನಿಗೊಳಗಾದವರಿಗೆ ೧೦ ಕೋಟಿ ರೂಪಾಯಿ ಪರಿಹಾರ ವಿತರಿಸಲಾಗಿದೆ. ಎಲ್ಲಾ ಅಧಿಕಾರಿಗಳು ಎಚ್ಚರದಿಂದ ಕಾರ್ಯ ನಿರ್ವಹಿಸಬೇಕು. ಹೆದ್ದಾರಿಗಳ ದುರಸ್ತಿಗೆ ೨೧೦ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ ಎಂದರು. ಪ್ರವಾಹ ಸಂದರ್ಭದಲ್ಲಿ ಎದುರಾಗಬಹುದಾದ ಸಾಂಕ್ರಾಮಿಕ ರೋಗಗಳ ಬಗ್ಗೆ ಆರೋಗ್ಯ ಇಲಾಖೆ ಮುನ್ನೆಚ್ಚರಿಕೆ ವಹಿಸಬೇಕು. ಡೆಂಘಿ ಪ್ರಕರಣಗಳು ಇಳಿಕೆಯಾಗಿದ್ದರೂ ಚಿಕುನ್ ಗುನ್ಯ, ಮಲೇರಿಯಾ ಹರಡದಂತೆ ಎಚ್ಚರಿಕೆ ವಹಿಸಬೇಕು. ಮಳೆ ಸಂದರ್ಭದಲ್ಲಿ ವಿದ್ಯುತ್ ಅಡಚಣೆಯಾಗದಂತೆ ನೋಡಿಕೊಳ್ಳಬೇಕು. ಅಗತ್ಯವಿರುವ ಪ್ರಮಾಣದಲ್ಲಿ ಟ್ರಾನ್ಸ್‌ಫಾರ್ಮರ್ ಮತ್ತಿತರ ಪರಿಕರಗಳನ್ನು ಸೂಕ್ತ ರೀತಿಯಲ್ಲಿ ದಾಸ್ತಾನು ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

<><*<><>*><>

ಆಪಲ್ ಫೋನ್ ಸೇರಿದಂತೆ ಎಲೆಕ್ಟ್ರಾನಿಕ್ ಸಾಧನಗಳ ತಯಾರಿಕೆಯಲ್ಲಿ ಜಗತ್ತಿನ ಅಗ್ರಗಣ್ಯ ಕಂಪನಿಗಳಲ್ಲಿ ಒಂದಾಗಿರುವ ಫಾಕ್ಸ್ ಕಾನ್ ನ ಸಿಇಒ ಮತ್ತು ಅಧ್ಯಕ್ಷ ಯಂಗ್ ಲಿಯು ಇಂದು ಬೆಂಗಳೂರಿಗೆ ಆಗಮಿಸಿದರು. ನವದೆಹಲಿಯಿಂದ ಎಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿದ ಅವರನ್ನು ಸರ್ಕಾರದ ಪರವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹಾಗೂ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಐಟಿಬಿಟಿ ಕಾರ್ಯದರ್ಶಿ ಏಕ್ ರೂಪ್ ಕೌರ್ ಹಾಜರಿದ್ದರು. ಫಾಕ್ಸ್ ಕಾನ್ ಕಂಪನಿಯು ರಾಜ್ಯದಲ್ಲಿ ಭಾರೀ ಹೂಡಿಕೆ ಮಾಡುತ್ತಿದ್ದು ಈ ಸಂಬಂಧ ವಿಸ್ತೃತ ಚರ್ಚೆ ನಡೆಸಲು ಲಿಯು ಇಲ್ಲಿಗೆ ಭೇಟಿ ನೀಡಿದ್ದಾರೆ.

<><*<><>*><>

ಈ ಬಾರಿ ರಾಜ್ಯದಲ್ಲಿ ಉತ್ತಮವಾಗಿ ಮಳೆಯಾಗಿದ್ದು, ರಾಜ್ಯದ ಜನ ಸಂತಸದಿಂದ ಇದ್ದಾರೆ. ಹಾಗಾಗಿ ಈ ಬಾರಿ ವಿಶ್ವವಿಖ್ಯಾತ ನಾಡ ಹಬ್ಬ ದಸರಾ ಮಹೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಹೆಚ್.ಸಿ ಮಹದೇವಪ್ಪ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ದಸರಾ ಕುರಿತ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ದಸರಾ ಆಚರಣೆಗೆ ಹೆಚ್ಚಿನ ಪ್ರಾಯೋಜಕತ್ವ ಪಡೆಯಲು ಅಧಿಕಾರಿಗಳು

ಮುಂದಾಗಬೇಕು. ಅಕ್ಟೋಬರ್ ೦೩ ರಂದು ಚಾಮುಂಡಿ ಬೆಟ್ಟದಲ್ಲಿ ಬೆಳಗ್ಗೆ ೯.೧೫ ರಿಂದ ೯.೪೫ ರೊಳಗೆ ಗಂಟೆಯೊಳಗೆ ದಸರಾ ಉದ್ಘಾಟನೆ ಮಾಡಲಾಗುವುದು ಎಂದರು. ದಸರಾ ಆಚರಣೆಗೆ ೪೦ ಕೋಟಿ ರೂಪಾಯಿವರೆಗೆ ಅನುದಾನ ಬಳಕೆಗೆ ಅವಕಾಶ ಕಲ್ಪಿಸಲು ಮುಖ್ಯಮಂತ್ರಿಗಳು ಅನುಮತಿ ನೀಡಿದ್ದಾರೆ. ಮೈಸೂರು ನಗರದ ಎಲ್ಲಾ ರಸ್ತೆಗಳನ್ನು ಪರಿಶೀಲಿಸಿ ಗುಂಡಿ ಮುಚ್ಚಿ, ಮರು ಡಾಂಬರೀಕರಣ ಮಾಡಲಾಗುವುದು ಎಂದರು. ದಸರಾದಲ್ಲಿ ರಾಜ್ಯ ಸರ್ಕಾರದ ೫ ಗ್ಯಾರೆಂಟಿಗಳ ಕುರಿತಾದ ಸ್ತಬ್ಧ ಚಿತ್ರಗಳ ಜೊತೆಗೆ ಸರ್ಕಾರದ ಒಂದು ವರ್ಷದ ಸಾಧನೆಯನ್ನು ಪ್ರತಿಬಿಂಬಿಸಬೇಕು. ದೀಪಾಲಂಕಾರ ದಸರಾ ಆಚರಣೆಯ ಮೆರುಗು ಹೆಚ್ಚಿಸಲು ಝುಗಮಗಿಸುವ ದೀಪಾಲಂಕಾರಕ್ಕೆ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

೨೦೨೨ನೇ ಸಾಲಿನ ೭೦ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಘೋಷಿಸಲಾಗಿದೆ. ಅತ್ಯುತ್ತಮ ಚಿತ್ರ ಪ್ರಶಸ್ತಿ ಆಯೆನಾಗೆ ದೊರೆತಿದೆ. ಮುರ್ಮುರಸ್ ಆಫ್ ದಿ ಜಂಗಲ್ ಚಿತ್ರಕ್ಕೆ ಅತ್ಯುತ್ತಮ ಸಾಕ್ಷ್ಯ ಚಿತ್ರ ಪ್ರಶಸ್ತಿ ಲಭಿಸಿದೆ. ಕನ್ನಡದ ಕಾಂತಾರ ಚಿತ್ರದಲ್ಲಿ ನಟಿಸಿದ ರಿಷಬ್ ಶೆಟ್ಟಿಗೆ ಅತ್ಯುತ್ತಮ ನಟ ಹಾಗೂ ತಮಿಳಿನ ತಿರುಚಿತ್ರಂಬಲಂ ಚಿತ್ರದಲ್ಲಿನ ನಟನೆಗಾಗಿ ನಿತ್ಯಾಮೆನನ್‌ಗೆ ಅತ್ಯುತ್ತಮ ನಟಿ ಪ್ರಶಸ್ತಿ ದೊರೆತಿದೆ. ಚೊಚ್ಚಲ ನಿರ್ದೇಶಕ ವಲಯದಲ್ಲಿ ಕನ್ನಡದ ಮಧ್ಯಂತರ ಚಿತ್ರದ ನಿರ್ದೇಶನಕ್ಕಾಗಿ ಬಸ್ತಿ ಶೆಣೈ ಅವರಿಗೆ ಪ್ರಶಸ್ತಿ ಲಭಿಸಿದೆ. ಜನಪ್ರಿಯ ಚಲನಚಿತ್ರ ವಲಯದಲ್ಲಿ ಕಾಂತಾರ ಚಿತ್ರಕ್ಕೆ ಪ್ರಶಸ್ತಿ ದೊರೆತಿದ್ದರೆ, ಕೆಜಿಎಫ್-೨ ಚಿತ್ರಕ್ಕೆ ಅತ್ಯುತ್ತಮ ಕನ್ನಡ ಚಿತ್ರ ಹಾಗೂ ಅತ್ಯುತ್ತ ಸಾಹಸ ನಿರ್ದೇಶನ ವಲಯದಲ್ಲಿ ಪ್ರಶಸ್ತಿ ಸಂದಿದೆ. ಕನ್ನಡದ ಶ್ರೇಷ್ಠ ನಟ ಪ್ರಶಸ್ತಿ ಪಡೆದ ನಟ ರಿಷಬ್ ಶೆಟ್ಟಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಮಂಧ್ಯಂತರ ಚಿತ್ರದ ಸಂಕಲನಕ್ಕಾಗಿ ಸುರೇಶ್ ಅರಸ್ ಅವರಿಗೂ ಪ್ರಶಸ್ತಿ ದೊರೆತಿರುವುದು ಉತ್ತಮ ಬೆಳವಣಿಗೆ ಈ ಸಾಧನೆ ಇತರೆ ಕಲಾವಿದರಿಗೆ ಸ್ಪೂರ್ತಿಯಾಗಲಿ ಎಂದು ಹೇಳಿದ್ದಾರೆ. ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರ್‌ಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮತ್ತಿತರ ಗಣ್ಯರು ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಈ ವರ್ಷದ ಡಿಸೆಂಬರ್ ೨೦ ರಿಂದ ಮೂರು ದಿನಗಳ ಕಾಲ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳವನ್ನು ಅದ್ದೂರಿಯಾಗಿ ಆಚರಿಸಲು ಸಿದ್ಧತೆ ಪ್ರಾರಂಭಿಸುವಂತೆ ಜಿಲ್ಲಾಡಳಿತಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ ನೀಡಿದ್ದಾರೆ. ಮಂಡ್ಯದಲ್ಲಿಂದು ವಿವಿಧ ಸಮಿತಿಗಳ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ

ಸಮ್ಮೇಳನಕ್ಕಾಗಿ ಒಟ್ಟು ೨೮ ಸಮಿತಿಗಳು ರಚಿಸಿ ಆದೇಶ ಹೊರಡಿಸಲಾಗಿದೆ. ಅಚ್ಚುಕಟ್ಟಾಗಿ ಸಮ್ಮೇಳನ ನಡೆಸ ಬೇಕು ಎಂದು ಹೇಳಿದರು.

<><*<><>*><>

ಪಶ್ಚಿಮಘಟ್ಟ ಸಂರಕ್ಷಿಸುವ ನಿಟ್ಟಿನಲ್ಲಿ, ಈ ವ್ಯಾಪ್ತಿಯ ಭೂ ಉಪಯೋಗ ಕುರಿತು ಹೊಸ ನಿಯಮಾವಳಿ ರೂಪಿಸುವವರೆಗೆ ಎಲ್ಲ ಭೂ ಪರಿವರ್ತನೆ ಪ್ರಸ್ತಾವನೆಗಳನ್ನು ತಾತ್ಕಾಲಿಕವಾಗಿ ತಡೆ ಹಿಡಿಯುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಇತ್ತೀಚೆಗೆ ಕೇಂದ್ರ ಸರ್ಕಾರ ಮತ್ತೊಮ್ಮೆ ಅಧಿಸೂಚನೆ ಮಾಡಿರುವ ಕಸ್ತೂರಿ ರಂಗನ್ ವರದಿಯ ಕುರಿತಂತೆ ಸಚಿವ ಸಂಪುಟದ ಸಭೆಯಲ್ಲಿ ಚರ್ಚಿಸಲು ಉದ್ದೇಶಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಕರ್ನಾಟಕ, ಕೇರಳ ಸೇರಿದಂತೆ ಪಶ್ಚಿಮಘಟ್ಟದ ಹಲವೆಡೆ, ಭೂಕುಸಿತ, ಗುಡ್ಡ ಕುಸಿತ ಸಂಭವಿಸುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ಕೊಡಗಿನ ಭೂಕುಸಿತ ಪ್ರಕರಣಗಳ ಅಧ್ಯಯನದಲ್ಲಿ ಅರಣ್ಯ ಒತ್ತುವರಿ ಮತ್ತು ಮಾನವ ಅಭಿವೃದ್ಧಿ ಚಟುವಟಿಕೆಗಳೇ ಪ್ರಾಥಮಿಕ ಕಾರಣ ಎನ್ನಲಾಗಿದ್ದು, ಪಶ್ಚಿಮಘಟ್ಟದಲ್ಲಿ ಸಂಭಾವ್ಯ ಅವಗಢ ತಡೆಯಲು ಮುಂಜಾಗರೂಕತಾ ಕ್ರಮವಾಗಿ ಈ ಪ್ರದೇಶದ ಒತ್ತುವರಿ ತೆರವಿಗೆ ಕ್ರಮವಹಿಸಲಾಗಿದೆ ಎಂದು ಈಶ್ವರ ಖಂಡ್ರೆ ಹೇಳಿದ್ದಾರೆ.

<><*<><>*><>

ಕಂದಾಯ ಇಲಾಖೆಯು ಆರ್.ಟಿ.ಸಿಯನ್ನು ಆಧಾರ್‌ನೊಂದಿಗೆ ಜೋಡಿಸುವ ಕಾರ್ಯವನ್ನು ಪ್ರಾರಂಭ ಮಾಡಿದ್ದು, ಕೋಲಾರ ಜಿಲ್ಲೆಯಾದ್ಯಂತ ಶೇಕಡ ೭೦ ರಷ್ಟು ಆರ್‌ಟಿಸಿಗಳನ್ನು ಆಧಾರ್‌ಗೆ ಜೋಡಣೆ ಮಾಡಲಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಅಕ್ರಂಪಾಷ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಇನ್ನುಳಿದ ಶೇಕಡ ೩೦ ರಷ್ಟು ಆಧಾರ್ ನ್ನು ಆರ್ ಟಿಸಿಯೊಂದಿಗೆ ಜೋಡಣೆ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದರು.

**ಧ್ವನಿ: ಅಕ್ರಂ ಪಾಷ**

<><*<><>*><>

ನೇಮಕಾತಿ ಹಾಗೂ ಸಾಮಗ್ರಿ ಖರೀದಿ ಸೇರಿದಂತೆ ಯಾವುದೇ ವಿಷಯದಲ್ಲಿ ಅವ್ಯವಹಾರಕ್ಕೆ ಅವಕಾಶವಿಲ್ಲದಂತೆ ಆಡಳಿತ ನಡೆಸುವ ಮೂಲಕ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಮಾದರಿಯಾಗಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದ್ದಾರೆ. ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಚಾಲ್ತಿಯಲ್ಲಿರುವ

ಕಾಮಗಾರಿಗಳು ಗುಣಮಟ್ಟದ ರೀತಿಯಲ್ಲಿ ನಡೆಯಬೇಕು. ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ಕಳಪೆ ಕಾಮಗಾರಿಯಾಗಿದ್ದರೆ ಗುತ್ತಿಗೆದಾರರಿಗೆ ನೋಟೀಸ್ ಜಾರಿ ಮಾಡಿ. ಸಂಸ್ಥೆಯ ಸುಪರ್ದಿಗೆ ಪಡೆಯುವ ಮೊದಲು ಕಟ್ಟಡದ ಕಾಮಗಾರಿಯ ಗುಣಮಟ್ಟದ ಬಗ್ಗೆ ಪರಿಶೀಲಿಸಿ ಎಂದು ಸಚಿವರು ತಿಳಿಸಿದರು.

<><*<><>*><>

ಇನ್ನು ಹವಾವರ್ತಮಾನ...

ರಾಜ್ಯದ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿದ್ದು, ಕರಾವಳಿಯಲ್ಲಿ ದುರ್ಬಲವಾಗಿತ್ತು. ಬಿ.ದುರ್ಗಾದಲ್ಲಿ ೭. ಕೃಷ್ಣರಾಜಪೇಟೆ ೫, ಮಂಕಿ, ಮೈಸೂರು, ಬೆಂಗಳೂರು ನಗರ ಜಿಲ್ಲೆಯಲ್ಲಿ ತಲಾ ೩ ಸೆಂಟಿಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಕರಾವಳಿಯಲ್ಲಿ ಭಾರೀ ಮಳೆ ನಿರೀಕ್ಷೆಯಿದೆ. ಬೆಂಗಳೂರು ಸುತ್ತಮುತ್ತ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**